ಪ್ರಾಥಮಿಕ ಶಾಲೆಗಳಲ್ಲೂ ಸಹ ಡೊನೇಷನ್ ಪಿಡುಗು ವಿಪರೀತವಾಗಿ ಹಬ್ಬುತ್ತಿದೆ. ಇದರಿಂದಾಗಿ ಮಧ್ಯಮ ವರ್ಗದ ಹಾಗೂ ಬಡ ತಂದೆತಾಯಿಗಳಿಗೆ ತಮ್ಮ ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ನೀಡುವುದೇ ಕಷ್ಟವಾಗುತ್ತಿದೆ. ಉದಾಹರಣೆಗೆ ಬೆಂಗಳೂರಿನ ತಾತಾ ಟಿಲ್ಕೋ ಫಾರಂನಲ್ಲಿರುವ ಶ್ರೀ ಕುಮಾರನ್ಸ್ ಚಿಲ್ಡ್ರನ್ಸ್ ಹೋಂ ಎಂಬ ಶೈಕ್ಷಣಿಕ ಸಂಸ್ಥೆಯಲ್ಲಿ ವಿದ್ಯಾರ್ಥಿಗಳಿಂದ ಕಡ್ಡಾಯವಾಗಿ 5000 ರೂ.ಗಳನ್ನು ಪ್ರತಿಯೊಬ್ಬರಿಂದ ವಸೂಲ್ಮಾಡಲಾಗುತ್ತಿದೆ ಎಂದು ತಿಳಿದುಬಂದಿದೆ. ಇದೇ ರೀತಿ ಇನ್ನೂ ಕೆಲವು ಸಂಸ್ಥೆಗಳು ಇದಕ್ಕಿಂತಲೂ ಹೆಚ್ಚಿಗೆ ಡೊನೇಷನ್ ಪಡೆಯುತ್ತಿವೆ. ಈ ಪಿಡುಗನ್ನು ನಿಲ್ಲಿಸಬೇಕು ಮಾತ್ರವಲ್ಲ, ವಿದ್ಯಾರ್ಥಿಗಳ ಸೇರ್ಪಡೆಯನ್ನು ಸರ್ಕಾರವೇ ಯೋಗ್ಯತೆ ಹಾಗೂ ಅರ್ಹತೆ ಆಧಾರದ ಮೇಲೆ ನಿರ್ಧರಿಸಬೇಕು. ಮುಂದಿನ ಶೈಕ್ಷಣಿಕ ವರ್ಷದಿಂದಲೇ ಈ ಸಲುವಾಗಿ ಸೂಕ್ತ ಕ್ರಮ ಕೈಗೊಳ್ಳಬೇಕೆಂಬುದಾಗಿ ಸರ್ಕಾರವನ್ನು ಒತ್ತಾಯಿಸುತ್ತೇನೆ.

ಶ್ರೀ ಟಿ.ಎಂ. ಮಂಜುನಾಥ್ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಪರವಾಗಿ):– ಮಾನ್ಯ ಅಧ್ಯಕ್ಷರೇ, ರಾಜ್ಯದಲ್ಲಿನ ಹೈಸ್ಕೂಲು ಪ್ರಾಥಮಿಕ ಶಾಲೆ ಮತ್ತು ಪೂರ್ವ ಪ್ರಾಥಮಿಕ ಶಾಲೆಗಳಲ್ಲಿ ಡೊನೇಷನ್ ಪಿಡುಗು ಹಬ್ಬುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲ. ಆಂಗ್ಲ ಪೂರ್ವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಹೆಚ್ಚಾಗಿ ಮಂತಿಗೆಯನ್ನು ಪಡೆಯುತ್ತಿರುವ ವಿರುದ್ಧ ಕ್ರಮಕೈಗೊಳ್ಳಲು ಈಗಿನ ಅನುದಾನ ಸಂಹಿತೆಯಲ್ಲಿ ನಿಯಮಗಳು ಇರುವುದಿಲ್ಲ. ಆದ್ದರಿಂದ ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕರ್ನಾಟಕ ಸರ್ಕಾರವು, ಕರ್ನಾಟಕ ಎಜುಕೇಷನ್ ಬಿಲ್ 1983ನ್ನು ರಾಷ್ಟ್ರಪತಿಯವರ ಅನುಮೋದನೆಗೆ ಕಳುಹಿಸಲಾಗಿದ್ದು, ಈ ಮಸೂದೆ ಜಾರಿಗೆ ಬಂದ ನಂತರ ಈ ಸಮಸ್ಯೆಗಳಿಗೆ ಪರಿಹಾರ ಲಭ್ಯವಾಗಬಹುದು.

(7) ಗುಳೇದಗುಡ್ಡದಲ್ಲಿ ಪ್ರೀ-ಮೆಟ್ರಿಕ್ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸೌಲಭ್ಯ

ಶ್ರೀ ಹೆಚ್.ವೈ. ಮೇಟಿ (ಗುಳೇದಗುಡ್ಡ):– ಮಾನ್ಯ ಅಧ್ಯಕ್ಷರೇ, ಬಿಜಾಪುರ ಜಿಲ್ಲೆಯ ಗುಳೇದಗುಡ್ಡದಲ್ಲಿ ಪರಿಶಿಷ್ಟ ಜಾತಿ ಹಾಗೂ ಪಂಗಡದ ಹಾಗೂ ಹಿಂದುಳಿದ ವರ್ಗಗಳ ಪ್ರೀ-ಮೆಟ್ರಿಕ್ ವಿದ್ಯಾರ್ಥಿಗಳಿಗೆ ಸರ್ಕಾರಿ ಹಾಸ್ಟೆಲ್ ಸೌಲಭ್ಯ ಇರುವುದಿಲ್ಲ. ಗುಳೇದಗುಡ್ಡದಲ್ಲಿ ಸುಮಾರು 6 ಪ್ರೌಢಶಾಲೆಗಳಿದ್ದು ಬಡ ವಿದ್ಯಾರ್ಥಿಗಳಿಗೆ ಬಹಳ ತೊಂದರೆಯುಂಟಾಗಿದೆ. ಕೂಡಲೇ 93-94ನೇ ಸಾಲಿನಲ್ಲಿ ಗುಳೇದಗುಡ್ಡದಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡ ಹಾಗೂ ಹಿಂದುಳಿದ ವರ್ಗಗಳ ಪ್ರೀ ಮೆಟ್ರಿಕ್ 100 ವಿದ್ಯಾರ್ಥಿಗಳ ಸಾಮರ್ಥ್ಯದ ಪ್ರತ್ಯೇಕ ಹಾಸ್ಟೆಲ್‌ಗಳನ್ನು ತೆರೆಯಬೇಕೆಂದು ಮಾನ್ಯ ಸಮಾಜ ಕಲ್ಯಾಣ ಸಚಿವರನ್ನು ವಿನಂತಿಸಿಕೊಳ್ಳುತ್ತೇನೆ.

ಶ್ರೀ ಧರ್ಮಸಿಂಗ್ (ಮಾನ್ಯ ಸಮಾಜ ಕಲ್ಯಾಣ ಖಾತೆ ಸಚಿವರು):– ಮಾನ್ಯ ಅಧ್ಯಕ್ಷರೇ, ಬಿಜಾಪುರ ಜಿಲ್ಲೆಯ ಬಾದಾಮಿ ತಾಲ್ಲೂಕು, ಗುಳೇದಗುಡ್ಡದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಪ್ರತ್ಯೇಕವಾಗಿ ವಿದ್ಯಾರ್ಥಿನಿಲಯ ಇಲ್ಲದೆ ಇದ್ದು, ಅವರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ ಇದರಿಂದಾಗಿ ಈಗಾಗಲೇ ಬಿಜಾಪುರ ಜಿಲ್ಲಾಪರಿಷತ್‌ನಿಂದ ಸದರಿ ಸ್ಥಳದಲ್ಲಿ 25 ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಬಾಲಕರ ಮೆಟ್ರಿಕ್‌ಪೂರ್ವ ವಿದ್ಯಾರ್ಥಿನಿಲಯವನ್ನು ಪ್ರಾರಂಭಿಸುವ ಸಲುವಾಗಿ ಸೂಕ್ತ ಪ್ರಸ್ತಾವನೆಯು ಬಂದಿದ್ದು, ಅದು ಸರ್ಕಾರದ ಪರಿಶೀಲನೆಯಲ್ಲಿದೆ. 1993-94ನೇ ಸಾಲಿನಲ್ಲಿ ಗುಳೇದಗುಡ್ಡದಲ್ಲಿ ಒಂದು ವಿದ್ಯಾರ್ಥಿ ನಿಲಯವನ್ನು ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳಲಾಗುವುದು.

(8) ಆಂಗ್ಲೋ ಇಂಡಿಯನ್ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸದ ಸೌಲಭ್ಯ.

Sri Derrick Fullinfaw (nominated):– I am making a statement regarding